ಬೈಲಹೊಂಗಲ ತಾಲ್ಲೂಕಿನ ಗೋವನ ಕೊಪ್ಪ ಗ್ರಾಮದಲ್ಲಿ ಆಯುರ್ವೇದ ಆಸ್ಪತ್ರೆ

371 (3249) ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 1999-2000ನೇ ಸಾಲಿನಲ್ಲಿ ಮಂಜೂರು ಮಾಡಲಾದ ಆಯುರ್ವೇದ ಆಸ್ಪತ್ರೆಗಳ ಸಂಖ್ಯೆ ಎಷ್ಟು?

ಆ) ಬೆಳಗಾವಿ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನ ಗೋವನಕೊಪ್ಪ ಗ್ರಾಮದಲ್ಲಿ ಒಂದು ಆಯುರ್ವೇದ ಆಸ್ಪತ್ರೆ ಮಂಜೂರು ಮಾಡಲಾಗುವುದೆ?

ಡಾ॥ ಎ. ಬಿ. ಮಾಲಕ ರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) 1999-2000ನೇ ಸಾಲಿನಲ್ಲಿ ಯಾವುದೇ ಆಯುರ್ವೇದ ಆಸ್ಪತ್ರೆಗಳನ್ನು ಮಂಜೂರು ಮಾಡಲಾಗಿರುವುದಿಲ್ಲ. ಆದರೆ 14 ಆಯುರ್ವೇದ ಚಿಕಿತ್ಸಾಲಯಗಳನ್ನು ಗ್ರಾಮೀಣ ಪ್ರದೇಶಗಳಲ್ಲಿ ತೆರೆಯಲು ಮಂಜೂರಾತಿಯನ್ನು ನೀಡಲಾಗಿದೆ.

ಆ) ಸರ್ಕಾರದ ಮುಂದೆ ಸದ್ಯಕ್ಕೆ ಇಂತಹ ಪ್ರಸ್ತಾವನೆ ಇರುವುದಿಲ್ಲ.

ರಾಜ್ಯದಲ್ಲಿ ಜನಸಂಖ್ಯೆ ನಿಯಂತ್ರಣ

373 (3403) ಶ್ರೀ ಆರ್. ನಾರಾಯಣ (ಬೆಳ್ಳಾವಿ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. ರಾಜ್ಯದಲ್ಲಿ ಜನಸಂಖ್ಯೆ ನಿಯಂತ್ರಿಸಲು ಹಮ್ಮಿಕೊಂಡಿರುವ ಕಾರ್ಯಕ್ರಮಗಳೇನು?

2. ಸದರಿ ಕಾರ್ಯಕ್ರಮಗಳ ಅನುಷ್ಠಾನದ ಮೂಲಕ ನಿಗದಿಪಡಿಸಿದ ಮಟ್ಟಕ್ಕೆ ಜನ ಸಂಖ್ಯಾ ನಿಯಂತ್ರಣದ ಗುರಿಯನ್ನು ಸಾಧಿಸಲಾಗಿದೆಯೇ?

3. ದಿನೇ ದಿನೇ ವಿಪರೀತವಾಗಿ ಹೆಚ್ಚುತ್ತಿರುವ ಸಂಖ್ಯೆಯನ್ನು ನಿಯಂತ್ರಿಸಲು ಹಾಲಿ ಕಾರ್ಯ ಕ್ರಮಗಳ ಜೊತೆಗೆ ಸರ್ಕಾರ ನೀಡುವ ಕೆಲವು ಸೌಲಭ್ಯಗಳನ್ನು ಒದಗಿಸಲು ಷರತ್ತುಗಳನ್ನು ವಿಧಿಸಲಾಗುವುದೇ?

ಡಾ॥ ಎ. ಬಿ. ಮಾಲಕ ರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

1. ತಾಯಿ ಮತ್ತು ಮಕ್ಕಳ ಆರೋಗ್ಯ ಕಾರ್ಯಕ್ರಮ.

2. ಕುಟುಂಬ ಕಲ್ಯಾಣ ವಿಧಾನಗಳ ಅಳವಡಿಕೆಯ ಕಾರ್ಯಕ್ರಮ.

3. ಜನನಾಂಗ ಮಾರ್ಗದ ಸೋಂಕು : ಲೈಂಗಿಕ ಮಾರ್ಗದ ಸೋಂಕು ನಿವಾರಣಾ ಕಾರ್ಯಕ್ರಮ

4. ಮಾಹಿತಿ ಶಿಕ್ಷಣ ಮತ್ತು ಸಂಪರ್ಕದ ಕಾರ್ಯ ಕ್ರಮ, ಅವುಗಳಾವುವೆಂದರೆ, ಮಡಿಕೆ ಪತ್ರಗಳಲ್ಲಿ ಘೋಷಣೆ, ಸ್ಪೀಕರ್ಸ್ ವೀಡಿಯೋ ಪ್ರೊಜೆಕ್ಟರ್ಸ್ ಮತ್ತು ದೂರದರ್ಶನದಲ್ಲಿ ಟಿ.ವಿ. ಸೀರಿಯಲ್‌ಗಳ ಮೂಲಕ ಭಿತ್ತರಿಸಲಾಗುತ್ತಿದೆ.

ಈ ಕಾರ್ಯಕ್ರಮಗಳನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಕಾರ್ಯಕ್ರಮಗಳು ಹಾಗೂ ಭಾರತ ಜನಸಂಖ್ಯಾ ಯೋಜನೆ-9ರಡಿಯಲ್ಲಿ ತೆಗೆದುಕೊಳ್ಳಲಾಗುತ್ತಿದೆ.

2. ಹೌದು. ಇದೊಂದು ನಿರಂತರ ಪ್ರಯತ್ನ.

3. ಇಲ್ಲಾ

ಚಿಂತಾಮಣಿ ಸರ್ಕಾರಿ ಪಾಲಿಟೆಕ್ನಿಕ್ ಕಟ್ಟಡ

375 (3477) ಶ್ರೀ ಚೌಡರೆಡ್ಡಿ (ಚಿಂತಾಮಣಿ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಂತಾಮಣಿ ಸರ್ಕಾರಿ ಪಾಲಿಟೆಕ್ನಿಕ್ ವಿದ್ಯಾರ್ಥಿನಿಲಯಕ್ಕೆ ಕಟ್ಟಡದ ಬಾಡಿಗೆಯನ್ನು ದಿನಾಂಕ : 01. 10. 1998 ರಿಂದ ನೀಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಆ) ತಾಂತ್ರಿಕ ನಿರ್ದೇಶಕರು ದಿನಾಂಕ: 22. 1. 2000 ದಂದು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿ ಆದೇಶವನ್ನು ಕೋರಿದ್ದರೂ ಇದುವರೆವಿಗೂ ಸರ್ಕಾರ ಈ ದಿಸೆಯಲ್ಲಿ ಯಾವುದೇ ಸಕಾರಾತ್ಮಕ ಕ್ರಮವನ್ನು ಕೈಗೊಳ್ಳದೇ ಇದ್ದು, ಈ ಬಗ್ಗೆ ಕ್ರಮ ಕೈಗೊಳ್ಳುವುದೇ ?

ಡಾ॥ ಜಿ. ಪರಮೇಶ್ವರ (ಉನ್ನತ ಶಿಕ್ಷಣ ಸಚಿವರು) :

ಅ) ಬಂದಿದೆ.

ಆ) ಈ ಬಗ್ಗೆ ಪರಿಶೀಲಿಸಲಾಗುತ್ತಿದ್ದು, ಕಟ್ಟಡದ ಬಾಡಿಗೆ ನೀಡಲು ಕ್ರಮ ಜರುಗಿಸಲಾಗುವುದು.

ಇ) ದಿನಾಂಕ 3.5.2000ದ ಚುಕ್ಕೆ ಗುರುತಿಲ್ಲದ ಪ್ರಶ್ನೋತ್ತರಗಳು

ಮಂಡ್ಯ ಜಿಲ್ಲಾ ಆಸ್ಪತ್ರೆಯ ಅಭಿವೃದ್ಧಿ

2724 (3438) ಶ್ರೀ ಆತ್ಮಾನಂದ ಎಂ.ಎಸ್. (ಮಂಡ್ಯ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೆ.ಹೆಚ್.ಎಸ್.ಡಿ.ಪಿ ಅನ್ವಯ ಜಿಲ್ಲಾ ಆಸ್ಪತ್ರೆ ಮಂಡ್ಯ ನಗರದಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆಯೆ ?

ಆ) ಹಾಗಿದ್ದಲ್ಲಿ ಇದರ ವಿವರಗಳೇನು ?

ಡಾ॥ ಎ.ಬಿ.ಮಾಲಕ ರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಹೌದು.

ಆ) ಮಂಡ್ಯ ಜಿಲ್ಲಾ ಸಾರ್ವಜನಿಕ ಆಸ್ಪತ್ರೆಯನ್ನು 310 ಹಾಸಿಗೆಗಳಿಂದ 400 ಹಾಸಿಗೆಗಳ ಆಸ್ಪತ್ರೆಯಾಗಿ ವಿಸ್ತರಿಸುವ ಹಾಗೂ ನವೀಕರಿಸುವ ಕಾಮಗಾರಿಯು ಕರ್ನಾಟಕ ಆರೋಗ್ಯ ವ್ಯವಸ್ಥೆಗಳ ಅಭಿವೃದ್ಧಿ ಯೋಜನೆಯಡಿ ಒಟ್ಟು ರೂ. 477.28 ಲಕ್ಷ ವೆಚ್ಚದಲ್ಲಿ ಕೈಗೊಳ್ಳಲಾಗಿದೆ. ಇದರಲ್ಲಿ ಅಪಘಾತ ತುರ್ತು